ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ಮಹಾನಗರದ ಕಿಮ್ಸ್ ಸಂಸ್ಥೆಯಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ ಸದರಿ ಖಾಲಿ ಹುದ್ದೆಗಳನ್ನು ತುಂಬಲಿಕ್ಕೆ ಸರ್ಕಾರವು ಕೈಗೊಂಡ ಕ್ರಮಗಳೇನು?

ಆ) ಹುಬ್ಬಳ್ಳಿ ಮಹಾನಗರದ ಕಿಮ್ಸ್ ಸಂಸ್ಥೆಗೆ ಇಂಡಿಯನ್ ಮೆಡಿಕಲ್ ಕೌನ್ಸಿಲ್‌ನಿಂದ ಮಾನ್ಯತೆ ದೊರೆತಿದೆಯೇ? ಇಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು? ಮಾನ್ಯತೆ ದೊರಕಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು?

ಡಾ: ಎಂ.ಶಂಕರ್‌ನಾಯಕ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು):

ಅ) 319 ಹುದ್ದೆಗಳು ಖಾಲಿ ಇರುತ್ತವೆ. ಕಿಮ್ಸ್ ಸಂಸ್ಥೆಯು ಸ್ವಾಯತ್ತ ಸಂಸ್ಥೆಯಾಗಿರುವುದರಿಂದ ಖಾಲಿ ಹುದ್ದೆಗಳನ್ನು ತುಂಬಲು ಸಂಸ್ಥೆಯ ನಿರ್ದೇಶಕರಿಗೆ ಅಧಿಕಾರವಿರುತ್ತದೆ. ಅದರಂತೆ 92 ಹುದ್ದೆಗಳನ್ನು ಈಗಾಗಲೇ ನೇಮಕ ಮಾಡಲಾಗಿದೆ. ಉಳಿದ ಹುದ್ದೆಗಳನ್ನು ತುಂಬಲು ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಆ) ಭಾರತೀಯ ವೈದ್ಯ ಪರಿಷತ್ತಿನ ಮಾನ್ಯತೆ ದೊರೆತಿದೆ.

ವಿಷಯ: ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರದ ಹೆಬಸೂರು ಗ್ರಾಮದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಕೊಠಡಿಗಳನ್ನು ಹೆಚ್ಚಿಸುವುದು

2463 (3353)

ಶ್ರೀ.ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರದ ಹೆಬಸೂರು ಗ್ರಾಮದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಇನ್ನೂ ಮೂರು ಕೊಠಡಿಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಆ ಕುರಿತು ಸರ್ಕಾರವು ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು):

ಅ) ಬಂದಿದೆ.

ಆ) ಕಟ್ಟಡ ನಿರ್ಮಾಣಕ್ಕೆ ಅಗತ್ಯವಾದ ಅಂದಾಜು ಪಟ್ಟಿ ನೀಲಿ ನಕಾಶೆಗಳನ್ನು

ಸಂಬಂಧಪಟ್ಟ ಲೋಕೋಪಯೋಗಿ ಇಲಾಖೆಯ ಅಭಿಯಂತರರಿಂದ ಪಡೆದು ಸಲ್ಲಿಸುವಂತೆ ಸದರಿ ಕಾಲೇಜಿನ ಪ್ರಿನ್ಸಿಪಲ್ ಅವರಿಗೆ ತಿಳಿಸಲಾಗಿದೆ. ವಿವರಗಳು ಬಂದ ನಂತರ 1998-99ನೇ ಸಾಲಿನ ಆಯವ್ಯಯದಲ್ಲಿ ಅನುದಾನವನ್ನು ಒದಗಿಸುವ ಬಗ್ಗೆ ಪರಿಶೀಲಿಸಲಾಗುವುದು.

ವಿಷಯ: ಧಾರವಾಡ ಜಿಲ್ಲೆಯಲ್ಲಿ ಸ್ವಂತ ಕಟ್ಟಡವಿಲ್ಲದ ಪದವಿಪೂರ್ವ ಕಾಲೇಜುಗಳು.

2464 (3876)

ಶ್ರೀ ಜಗದೀಶ್‌ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯಲ್ಲಿ ಸ್ವಂತ ಕಟ್ಟಡವಿಲ್ಲದ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು?

ಆ) ಈ ರೀತಿ ಸ್ವಂತ ಕಟ್ಟಡಗಳಿಲ್ಲದ ಪದವಿ ಪೂರ್ವ ಕಾಲೇಜುಗಳಿಗೆ ಸ್ವಂತ ಕಟ್ಟಡ ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೆನು?

ಶ್ರೀ ಹೆಚ್.ಜಿ.ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು):

ಅ) ಧಾರವಾಡ ಜಿಲ್ಲೆಯಲ್ಲಿ ಯಾವುದೇ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜುಗಳು ಇರುವುದಿಲ್ಲ. ಧಾರವಾಡ ಜಿಲ್ಲೆಯಲ್ಲಿನ ಎಲ್ಲಾ 33 ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಸಂಯುಕ್ತ ಪದವಿಪೂರ್ವ ಕಾಲೇಜುಗಳಾಗಿರುವುದರಿಂದ ಅವು ಪ್ರೌಢಶಾಲಾ ಕಟ್ಟಗಳಲ್ಲಿ ನಡೆಯುತ್ತಿವೆ.

ಆ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಸ್ಥಳಾವಕಾಶ ಅಗತ್ಯತೆ ಇರುವಲ್ಲಿ ಆಯವಯ್ಯದ ಲಭ್ಯತೆಗೆ ಒಳಪಟ್ಟು ಹೆಚ್ಚುವರಿ ಕೊಠಡಿಗಳನ್ನು ಹಂತ ಹಂತವಾಗಿ ನಿರ್ಮಾಣ ಮಾಡಲಾಗುವುದು.

ವಿಷಯ: ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರದ ಆಸ್ಪತ್ರೆಯ ಬಗ್ಗೆ.

2465 (3875)

ಶ್ರೀ ಜಗದೀಶ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರದಲ್ಲಿ ಬರತಕ್ಕ ಗೋಕುಲ ಗ್ರಾಮದಲ್ಲಿ ಲೋಕಸಭಾ